ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	828
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	20.09.2021
ಉತ್ತರಿಸುವ ಸಚಿವರು	:	ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ಹೊಸ ಪಡಿತರ ಚೀಟಿ ನೀಡಲು ನಿಗಧಿಪಡಿಸಿರುವ ಕಾನೂನು ಕ್ರಮಗಳು ಯಾವುವು; (ಮಾಹಿತಿಯನ್ನು ನೀಡುವುದು)	ರಾಜ್ಯದಲ್ಲಿ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ (ಬಿ.ಪಿ.ಎಲ್) ಪಡಿತರ ಚೀಟಿಯನ್ನು ಹೊಂದಲು ನಿಗದಿಪಡಿಸಿರುವ ಮಾನದಂಡಗಳು ಈ ಕೆಳಕಂಡಂತಿವೆ. • ವೇತನವನ್ನು ಗಣನೆಗೆ ತೆಗೆದುಕೊಳ್ಳಡೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು. • ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು. • ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು. • ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.
(ಆ)	ರಾಜ್ಯದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿ ಪರವಾನಗಿಯನ್ನು ನೀಡಲಾಗುತ್ತಿದೆಯೇ;	ಹೌದು. ಸಾರ್ವಜನಿಕ ವಿತರಣಾ ಪದ್ಧತಿಯಡಿ ಜಿಲ್ಲೆಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಅಧಿಕಾರವನ್ನು ಜಿಲ್ಲೆಯ ಸಕ್ಷಮ ಪ್ರಾಧಿಕಾರಿಯಾಗಿರುವ ಜಂಟಿ/ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರಿಗೆ ಅಧಿಕಾರ ನೀಡಲಾಗಿದೆ.

(೩) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್ ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿಗಳನ್ನು ನೀಡುವುದು)

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಅಂತ್ಯೋದಯ ಅನ್ನ ಯೋಜನೆ, ಆದ್ಯತಾ (ಪಿ.ಹೆಚ್.ಹೆಚ್) ಮತ್ತು ಆದ್ಯತೇತರ (ಎನ್.ಪಿ.ಹೆಚ್.ಹೆಚ್) ಕಾರ್ಡ್‌ಗಳ ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ತಾಲ್ಲೂಕು	ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ		ಒಟ್ಟು ಆದ್ಯತಾ ಪಡಿತರ ಚೀಟಿಯ ಸಂಖ್ಯೆ	ಚಾಲ್ತಿಯಲ್ಲಿರುವ ಆದ್ಯತೇತರ ಪಡಿತರ ಚೀಟಿಗಳ ಸಂಖ್ಯೆ	ಒಟ್ಟು
		ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿಯ ಸಂಖ್ಯೆ	ಆದ್ಯತಾ ಪಡಿತರ ಚೀಟಿಯ ಸಂಖ್ಯೆ			
1	ದೇವನಹಳ್ಳಿ	3303	46774	50077	5822	55899
2	ದೊಡ್ಡಬಳ್ಳಾಪುರ	2926	66097	69023	3127	72150
3	ಹೊಸಕೋಟೆ	3932	58788	62720	7687	70407
4	ನೆಲಮಂಗಲ	4235	42018	46253	3668	49921
	ಒಟ್ಟು	14396	213677	228073	20304	248377

ರಾಮನಗರ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಅಂತ್ಯೋದಯ ಅನ್ನ ಯೋಜನೆ, ಆದ್ಯತಾ (ಪಿ.ಹೆಚ್.ಹೆಚ್) ಮತ್ತು ಆದ್ಯತೇತರ (ಎನ್.ಪಿ.ಹೆಚ್.ಹೆಚ್) ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ತಾಲ್ಲೂಕು	ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ		ಒಟ್ಟು ಆದ್ಯತಾ ಪಡಿತರ ಚೀಟಿಯ ಸಂಖ್ಯೆ	ಚಾಲ್ತಿಯಲ್ಲಿರುವ ಆದ್ಯತೇತರ ಪಡಿತರ ಚೀಟಿಗಳ ಸಂಖ್ಯೆ	ಒಟ್ಟು
		ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿಯ ಸಂಖ್ಯೆ				
1	ಚನ್ನಪಟ್ಟಣ	4755	64489	69244	5088	74332
2	ಕನಕಪುರ	4939	94173	99112	3360	102472
3	ಮಾಗಡಿ	5225	51634	56859	2621	59480
4	ರಾಮನಗರ	4112	66737	70849	3396	74245
	ಒಟ್ಟು	19031	277033	296064	14465	310529

ಆನಾಸ 245 ಡಿಆರ್‌ಎ 2021 (ಇ-ಆಫೀಸ್)

(ಉಮೇಶ ವಿ.ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು